/

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ 318.

## ದಿನಾಂಕ :- 20/08/2022 ರಂದು ವಾರ್ಡಿನ ನೋಡಲ್ ಅಧಿಕಾರಿರವರ ಅಧ್ಯಕ್ಷತೆಯಲ್ಲಿ ವಾರ್ಡಿನ/ಕೊಂದು ಕೋರತೆಗಳ ಬಗ್ಗೆ ನಡೆದ ಸಭೆಯ ನಡುವಳಿ

**ಸಭೆಗೆ ಹಾಜರಿದ್ದ ಅಧಿಕಾರಿಗಳು :-**

- ಶ್ರೀ. ಶ್ರೀ.ರವಿವಡ್ಡರ್, ನೋಡಲ್ ಅಧಿಕಾರಿ
- ಶ್ರೀ. ಬಸವರಾಜು ವಾರ್ಡ್ ಅಭಿಯಂತರರು
- ಶ್ರೀ. ವಿನಯ ಕಿರಿಯ ಆರೋಗ್ಯ ಪರೀವಿಕ್ಷಕರು
- ಶ್ರೀ. ರಾಹುಲ್, ಸಿವಿಲ್ ಇಂಜಿನೀಯರ್ ಬಿ.ಡಬ್ಲ್ಯೂ.ಎಸ್.ಎಸ್.ಬಿ ವಾರ್ಡ್ ಸಂಖ್ಯೆ–31.
- ಶ್ರೀ. ಅಕ್ಕಮ್ಮ, ಎಲೆಕ್ಟ್ರಿಕಲ್ ಇಂಜಿನೀಯರ್ ಬೆಸ್ಕಾಮಂ ವಾರ್ಡ್ ಸಂಖ್ಯೆ–31.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ನೋಡಲ್ ಅಧಿಕಾರಿರವರು ಎಲ್ಲಾ ಸದಸ್ಯರು ಹಾಗೂ ಅಧಿಕಾರಿಗಳನ್ನು ಸ್ವಾಗತಿಸಿದರು. ವಾರ್ಡ್–31 ರ ವಾರ್ಡ್ ಸಮಿತಿ ಸಭೆಯನ್ನು ತಮಿಳ್ ಸಂಘ ಸ್ಕೂಲ್‌ನಲ್ಲಿ ನಡೆಸಲಾಯಿತು. ನೋಡಲ್ ಅಧಿಕಾರಿಗಳು ವಾರ್ಡ್‌ನ ಸಾರ್ವಜನಿಕರ ಕುಂದು ಕೊರತೆಗಳನ್ನು ಸದಸ್ಯರು ಮತ್ತು ಅಧಿಕಾರಿಗಳ ಜೋತೆಯಲ್ಲಿ ಚರ್ಚಿಸಿದರು ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳವ ಬಗ್ಗೆ ಸಂಬಂದಪಟ್ಟ ಅಧಿಕಾರಿ ಹಾಗೂ ನೌಕರರುಗಳಿಗೆ ಈ ಕೆಳಕಂಡತೆ ತಿಳಿಸಲಾಗಿರುತ್ತದೆ

❖ **ಆರೋಗ್ಯ ಇಲಾಖೆಗೆ ಸಂಬಂದಿಸಿರುವ್ರುದು**

- ವಾರ್ಡ್ ವ್ಯಾಪ್ತಿಯಲ್ಲಿನ ಹೆಚ್.ಬಿ.ಆರ್ ಲೇಔಟ್ ಬ್ಲಾಕ್ ಸ್ಪಾಟ್‌ಗಳನ್ನು ತ್ವರಿತವಾಗಿ ವಿಲೇವಾರು ಮಾಡಲು ಕಿರಿಯ ಆರೋಗ್ಯ ಪರೀವಿಕ್ಷಕರಿಗೆ ಸೂಚಿಸಿದರು
- ವಾರ್ಡ್ ವ್ಯಾಪ್ತಿಯ ಸೌಕಾರ್ ಲೇನ್‌ನಲ್ಲಿ ಕಸದ ಸಂಗ್ರಹಣೆ ಸರಿಯಾಗಿ ನಿರ್ವಹಣೆ ಮಾಡಲು ಕಿರಿಯ ಆರೋಗ್ಯ ಪರೀವಿಕ್ಷಕರಿಗೆ ಸೂಚಿಸಿದರು

**ಕ್ರಮ : ಕಿರಿಯ ಆರೋಗ್ಯ ಪರೀವಿಕ್ಷಕರು ಈ ಮೇಲೆ ಸೂಚಿಸಿರುವ ಸಮಸ್ಯೆಗಳನ್ನು ಕೂಡಲೆ ಪರಿಹರಿಸುತ್ತೇನೆ ಎಂದು ಪ್ರತಿಕ್ರಿಯೆ ನೀಡಿದರು.**

❖ **<u>ಸ್ಟ್ರೀಟ್ ಲೈಟ್ ಇಲಾಖೆಗೆ ಸಂಬಂದಿಸಿರುವುದು</u>**

- ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ದೀಪಗಳು ಹೆಚ್ಚಾಗಿ ರೀಪೇರಿಗಳಿಗೆ ಒಳಗಾಗುತ್ತಿದ್ದು ಕೂಡಲೆ ಕಾರ್ಯಾಚರಣೆ ಹಾಗೂ ಬೀದಿ ದೀಪ ನಿರ್ವಹಣೆ ಬಗ್ಗೆ ಅಥವಾ ಕುಂದು ಕೊರತೆಗಳನ್ನು ಹಾಲಿಸಲು ಈ ಇಲಾಖೆಯಿಂದ ಯಾವದೇ ಅಧಿಕಾರಿ ವರ್ಗದವರು ಹಾಜರಿರದ ಕಾರಣ ಮುಂದಿನ ಸಭೆಯಲ್ಲಿ ತಪ್ಪದೆ ಹಾಜರಾಗಲು ಸೂಚಿಸಿದರು.

❖ **<u>ಪೊಲೀಸ್ ಇಲಾಖೆಗೆ (ಸಿವಿಲ್) ಸಂಬಂದಿಸಿರುವುದು</u>**

- ವಾರ್ಡ್ ವ್ಯಾಪ್ತಿಯಲ್ಲಿ ಗಾಂಜಾ ಸೇವನೆ, ಮದ್ಯ ಕುಡಿಯುವುದು, ಕಳ್ಳರ ಹಾವಳಿ ಹೆಚ್ಚಾಗಿ ಕಂಡುಬಂದಿದ್ದು ಪೊಲೀಸ್ ಇಲಾಖೆ ಸಭೆಗೆ ಹಾಜಾರಾದೆ ಇರುವ ಕಾರಣದಿಂದ ಮುಂದಿನ ಸಭೆಯಲ್ಲಿ ಸಾರ್ವಜನಿಕರ ಕುಂದು ಕೊರತೆಗಳನ್ನು ಕೇಳಿಸಿಕೊಳ್ಳಲು ತಪ್ಪದೆ ಸಭೆಗೆ ಹಾಜರಾಲು ಸೂಚಿಸಿದೆ.

❖ **<u>ಪೊಲೀಸ್ ಇಲಾಖೆಗೆ (ಟ್ರಾಫಿಕ್) ಸಂಬಂದಿಸಿರುವುದು</u>**

- ವಾರ್ಡ್ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ವಾಹನಗಳ ನೀಲುಗಡೆ, ನಿರ್ಜೀವವಾದ ವಾಹನಗಳ ತೆರುವುಗೊಳಿಸುದು....ಇತರೆ ಸಮಸ್ಯೆಗಳು ಹಾಲಿಸಲು ಪೊಲೀಸ್ ಇಲಾಖೆ ಸಭೆಗೆ ಹಾಜಾರಾದೆ ಇರುವ ಕಾರಣದಿಂದ ಮುಂದಿನ ಸಭೆಯಲ್ಲಿ ಸಾರ್ವಜನಿಕರ ಕುಂದು ಕೊರತೆಗಳನ್ನು ಕೇಳಿಸಿಕೊಳ್ಳಲು ತಪ್ಪದೆ ಸಭೆಗೆ ಹಾಜರಾಲು ಸೂಚಿಸಿದೆ.

ಈ ಎಲ್ಲಾ ವಿಷಯಗಳ ಬಗ್ಗೆ ತುರ್ತಾಗಿ ಕ್ರಮ ಕೈಗೊಳ್ಳಲು ಸಂಬಂದಪಟ್ಟವರಿಗೆ ಸೂಚಿಸುತ್ತಾ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದೆ.

**ನೋಡಲ್ ಅಧಿಕಾರಿ/ ಸದಸ್ಯ ಕಾರ್ಯದರ್ಶಿ**
**ವಾರ್ಡ್–31**

ಪ್ರತಿಗಳನ್ನು:

- ಮಾನ್ಯ ಆಡಳಿತಾಧಿಕಾರಿ, ಬಿ.ಬಿ.ಎಂ.ಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಮಾನ್ಯ ವಲಯ ಆಯುಕ್ತರು ರವರ ಮಾಹಿತಿಗಾಗಿ ಸಲ್ಲಿಸಿದೆ.
- ಮಾನ್ಯ ಜಂಟಿ ಆಯುಕ್ತರು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ
- ಮುಖ್ಯ ಅಭೀಯಂತರರು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ.
- ಕಾರ್ಯಪಾಲಕ ಅಭಿಯಂತರರು, ಪುಲಿಕೇಶಿನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆ.ಜಿ.ಹಳ್ಳಿ ಉಪ–ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನ ತ್ಯಾಜ್ಯ) ಪುಲಕೇಶಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಂದಾಯ ಅಧಿಕಾರಿ (ಕೆ.ಜಿ. ಹಳ್ಳಿ) ಉಪವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ನೇತಾಜಿ ರಸ್ತೆ, ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಾರ್ಯಪಾಲಕ ಅಭಿಯಂತರರು (ಸ್ಟ್ರೀಟ್ ಲೈಟ್) ರವರ ಮಾಹಿತಿಗಾಗಿ ಸಲ್ಲಿಸಿದೆ.
- ಕಛೇರಿ ಪ್ರತಿ.